**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆಃ 500/2020**

**ಪಿರ್ಯಾದಿ ಃ** ಬಿಳಿಗೆರೆ ಪೊಲೀಸರು

**ವಿರುದ್ಧ**

**ಆರೋಪಿತರು ಃ**

1. ಮಹದೇವ, ಬಿನ್ ದೊಡ್ಡೇಗೌಡ, 30 ವರ್ಷ
2. ರಾಜಮ್ಮ, ಕೋಂ ಮಹದೇವ, 35 ವರ್ಷ

ವಾಸಃ ಸಾಲುಂಡಿ ಗ್ರಾಮ, ನಂಜನಗೂಡು ತಾ.

**ದೋಷಾರೋಪಣೆ**

*ಶ್ರೀ ಕಿಶೋರ್ ಕುಮಾರ್ ಎಂ., 1 ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ 11.02.2019 ರಂದು ಬೆಳಗ್ಗೆ 8.00 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಸಾಲುಂಡಿ ಗ್ರಾಮದಲ್ಲಿ ಚಾಸಾ-1 ರವರ ಮನೆಯ ಮುಂದೆ ಸಾರ್ವಜನಿಕ ಗಲ್ಲಿಯಲ್ಲಿ ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ನಮ್ಮ ಮನೆಯ ಮುಂದೆ ನೀನೇ ಕಸವನ್ನು ಹಾಕಿದ್ದೀಯಾ ಎಂದು ಚಾಸಾ-1 ರವರ ಮೇಲೆ ತೀಟೆ ಜಗಳ ತೆಗೆದು, ಆ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಕೆಳಕ್ಕೆ ಕೆಡವಿಕೊಂಡು ಕೈಯಿಂದ ಹೊಟ್ಟೆ ಮತ್ತು ಮೈಕೈಗೆ ಗುದ್ದಿ ಸ್ವಯಂ ಪ್ರೇರಿತವಾಗಿ ಸಾಮಾನ್ಯ ಸ್ವರೂಪದ ನೋವುಂಟುಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 323 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ಆ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರ ಸೀರೆ ಸೆರಗನ್ನು ಎಳೆದು ಅವಮಾನ ಮಾಡಿ, ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಅಪರಾಧಿಕ ಬಲವನ್ನು ಪ್ರಯೋಗಿಸಿರುತ್ತೀರಿ. ಆದ್ದರಿಂದ 1 ನೇ ಆರೋಪಿಯಾದ ನೀವು ಭಾರತ ದಂಡ ಸಂಹಿತೆಯ ಕಲಂ 354 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ಆ ಪೈಕಿ 2 ನೇ ಆರೋಪಿಯಾದ ನೀವು ಗಳದಿಂದ ಚಾಸಾ-1 ರವರ ಬಲಗೈ ಮತ್ತು ಎಡಗೈ ಮೊಳಸಂದಿನ ಹತ್ತಿರ ಸ್ವಯಂ ಪ್ರೇರಿತವಾಗಿ

ಹೊಡೆದು ಸಾಮಾನ್ಯ ಸ್ವರೂಪದ ನೋವುಂಟುಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 324 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ಆ ಪೈಕಿ 1 ನೇ ಆರೋಪಿಯಾದ ನೀವು ಚಪ್ಪಲಿಯಿಂದ ಚಾಸಾ-1 ರವರ ಮೈಕೈಗೆ ಹೊಡೆದು ಅಪರಾಧಿಕ ಬಲಪ್ರಯೋಗ ಮಾಡಿರುತ್ತಾರೆ. ಆದ್ದರಿಂದ ಆರೋಪಿತರು ಭಾ.ದಂ.ಸಂ.ಕಲಂ.355 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ಆ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಬಡ್ಡಿ ಮಗಳೇ, ಸೂಳೇ ಮಗಳೇ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನಮಾಡಿ ಶಾಂತಿಯನ್ನು ಭಂಗಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 509 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರುಗಳು ಅಪರಾಧವನ್ನು ಎಸಗುವ ಸಮಾನ ಉದ್ದೇಶಹೊಂದಿ, ಆ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ನೀನೇನಾದರೂ ಪೊಲೀಸ್ ಠಾಣೆಗೆ ಕೇಸನ್ನು ಕೊಟ್ಟರೆ ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ ಕಾರಣ, ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿತರು ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 20.06.2023 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.**
**ನಂಜನಗೂಡು**

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆಃ 500/2020

ಪಿರ್ಯಾದಿ ಃ ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿತರು ಃ

1. ಮಹದೇವ, ಬಿನ್ ದೊಡ್ಡೇಗೌಡ, 30 ವರ್ಷ
2. ರಾಜಮ್ಮ, ಕೋಂ ಮಹದೇವ, 35 ವರ್ಷ

ವಾಸಃ ಸಾಲುಂಡಿ ಗ್ರಾಮ, ನಂಜನಗೂಡು ತಾ.

ಃ ಆಪಾದನೆ ಃ

ಪ್ರಶ್ನೆ1 ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ ಃ

ಪ್ರಶ್ನೆ2 ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ ಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು


1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆಃ 500/2020

ಪಿರ್ಯಾದಿ ಃ ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿತರು ಃ

1. ಮಹದೇವ, ಬಿನ್ ದೊಡ್ಡೇಗೌಡ, 30 ವರ್ಷ
2. ರಾಜಮ್ಮ, ಕೋಂ ಮಹದೇವ, 35 ವರ್ಷ

ವಾಸಃ ಸಾಲುಂಡಿ ಗ್ರಾಮ, ನಂಜನಗೂಡು ತಾ.

ಃ ಆಪಾದನೆ ಃ

ಪ್ರಶ್ನೆ1 ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ ಃ

ಪ್ರಶ್ನೆ2 ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ ಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು